# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿಗೆ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್‌ಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂ:ಕಸಂವಾಪ್ರ 81 ಕೆಎಂಯು 2012 ದಿ:03.05.2012

2. ಪತ್ರ ಸಂ: ಆಪ್ರಾಸಂಪ:/ಎಸಿಟಿ.6/67 /2012-13, ದಿನಾಂಕ 16.11.2012.

ಪ್ರಸ್ತಾವನೆ:

ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ 2012-13ನೇ ಸಾಲಿನ ಕ್ರಿಯಾ ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಅನುಮೋದನೆ ನೀಡಿದ್ದು, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್, ಧರ್ಮಸ್ಥಳ ಇವರ ಸಹಯೋಗದೊಂದಿಗೆ ಸ್ಮಾರಕಗಳ ಸಂರಕ್ಷಣೆ ಅಭಿವೃದ್ಧಿಗೆ ರೂ.80.00ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

2012-13ನೇ ಸಾಲಿನಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್‌ವತಿಯಿಂದ ಕೈಗೊಳ್ಳುವ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಯ 9ನೇ ಹಂತದ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ದಿನಾಂಕ: 06.08.2012 ರಂದು ನಡೆದ ತಾಂತ್ರಿಕ ಸಲಹಾ ಸಭೆಯಲ್ಲಿ ತಾಂತ್ರಿಕ ಅನುಮೋದನೆ ನೀಡಲಾಗಿದೆ. ಪ್ರಸ್ತುತ ಸಾಲಿನ ಯೋಜನೇತರ ಕಾರ್ಯಕ್ರಮದಡಿ ಲೆಕ್ಕ ಶೀರ್ಷಿಕೆ 2005-00-103-0-01(ಯೋಜನೇತರ)_059-ಇತರ ಖರ್ಚು ಅಡಿಯಲ್ಲಿ ರೂ.80.00 ಲಕ್ಷಗಳ ಅನುದಾನವನ್ನು ನಿಗಧಿಗೊಳಿಸಿದ್ದು ಸದರಿ ಮೊತ್ತವನ್ನು ಪೇಯಿಸ್ ರಿಸಿಪ್ಟ್ ಮೂಲಕ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡುವಂತೆ ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆರವರು ಮೇಲೆ ಓದಲಾದ(2)ರ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 379 ಕೆಎಂಯು 2012 ಬೆಂಗಳೂರು, ದಿ:12.12.2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್, ಬೆಂಗಳೂರು ಇವರ ವತಿಯಿಂದ 2012-13ನೇ ಸಾಲಿನಲ್ಲಿ ಕೈಗೊಳ್ಳುವ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ರೂ.80.00 ಲಕ್ಷ (ರೂಪಾಯಿ ಎಂಭತ್ತು ಲಕ್ಷಗಳು ಮಾತ್ರ) ಅನುದಾನವನ್ನು ಪೇಯಿಸ್ ರಿಸಿಪ್ಟ್ ಮೂಲಕ ನಿರ್ದೇಶಕರು, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್, ಬೆಂಗಳೂರು, ಇವರಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆಯುಕ್ತರು, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ರವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ

**(ಅ) ಮೇಲೆ ಬಿಡುಗಡೆ ಮಾಡಿದ ಅನುದಾನವು ಅನುಮೋದಿತ ಕಾಮಗಾರಿಗಳಿಗಾಗಿ 40:40:20ರ ಅನುಪಾತದಂತೆ ಸರ್ಕಾರದಿಂದ ಪ್ರತಿ ಕಾಮಗಾರಿಗೆ ನೀಡುವ ಗರಿಷ್ಠ ರೂ.10.00ಲಕ್ಷ ಅಥವಾ ಶೇ.40 ಭಾಗ ಇದರಲ್ಲಿ ಯಾವುದು ಕಡಿಮೆಯೋ ಅದಕ್ಕೆ ಮಾತ್ರ ಸೀಮಿತಗೊಂಡಿದೆ.**

(ಆ) ಬಿಡುಗಡೆಯಾದ ಅನುದಾನವು ನಿಗಧಿತ ಕಾರ್ಯಕ್ರಮಕ್ಕೆ ಸಮರ್ಪಕವಾಗಿ ಬಳಸಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಪಡೆಯುವುದು.

ಈ ವೆಚ್ಚವನ್ನು 2012-13ನೇ ಸಾಲಿನ ಲೆಕ್ಕ ಶೀರ್ಷಿಕೆ 2205-00-103-0-01-059 - ಇತರೆ ಖರ್ಚುಗಳ (ಯೋಜನೇತರ) ಅಡಿ ಭರಿಸತಕ್ಕದ್ದು.

ಈ ಆದೇಶವನ್ನು ಅಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಶಿಇ 839 ಐಎಫ್ (ಬಿ&ಎ) 2012, ದಿನಾಂಕ:04.12.2012 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ, ಮತ್ತು ವಾರ್ತಾ ಇಲಾಖೆ.
(ಆಡಳಿತ ಕನ್ನಡ)

ಇವರಿಗೆ:-

1. ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಕರ್ನಾಟಕ ಪ್ರದರ್ಶನ ಪ್ರಾಧಿಕಾರ ಆವರಣ, ದೊಡ್ಡಕೆರೆ ಮೈದಾನ, ಮೈಸೂರು-10
3. ನಿರ್ದೇಶಕರು, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್, ಶ್ರುತ ಕಾಂಪ್ಲೆಕ್ಸ್ ನಂ.19, ಪ್ರಿಮ್ ರೋಸ್ ರಸ್ತೆ, ಬೆಂಗಳೂರು-25.
4. ಅಂತರಿಕ ಆರ್ಥಿಕ ಸಲಹೆಗಾರರು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು..
6. ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆರವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.